# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 1088
ಸದಸ್ಯರ ಹೆಸರು ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ: 22-12-2021
ಉತ್ತರಿಸುವ ಸಚಿವರು: ಲೋಕೋಪಯೋಗಿ ಸಚಿವರು

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ಇತ್ತೀಚೆಗೆ ಮೂರು ಭಾರಿ ರಸ್ತೆ ಮತ್ತು ಭೂ ಕುಸಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಸದರಿ ಭೂ ಕುಸಿತ ಸಂಬಂಧ ಪರಿಶೀಲಿಸಲು ತಜ್ಞರ ಸಮಿತಿಯನ್ನು ನೇಮಕ ಮಾಡಲಾಗಿದೆಯೇ? | ಸದರಿ ಭೂ ಕುಸಿತ ಸಂಬಂಧ ಪರಿಶೀಲಿಸಲು ತಜ್ಞರ ಸಮಿತಿಯನ್ನು ನೇಮಕ ಮಾಡಿರುವುದಿಲ್ಲ. ಆದಾಗ್ಯೂ ಭಾರತೀಯ ವಿಜ್ಞಾನ ಸಂಸ್ಥೆಯ ತಜ್ಞರಿಂದ ಪರಿಶೀಲಿಸಿ ವರದಿ ಪಡೆಯಲಾಗಿದೆ. |
| ಇ) | ತಜ್ಞರ ಸಮಿತಿಯ ವರದಿ ಪಡೆಯಲಾಗಿದೆಯೇ? | |
| ಈ) | ಹಾಗಾದಲ್ಲಿ ಭೂಕುಸಿತಕ್ಕೆ ಕಾರಣಗಳೇನು ? | ಇತ್ತೀಚೆಗೆ ಬಿದ್ದ ಭಾರಿ ಮಳೆಯಿಂದ ಭೂ ಕುಸಿತ ಉಂಟಾಗಿರುತ್ತದೆ. |
| ಉ) | ಭೂ ಕುಸಿತ ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು (ವಿವರ ನೀಡುವುದು) | ಭೂ ಕುಸಿತ ತಡೆಗಟ್ಟಲು ಭಾರತೀಯ ವಿಜ್ಞಾನ ಸಂಸ್ಥೆಯ ತಜ್ಞರ ವರದಿಯಂತೆ Reinforced Earth Steepened Slope Structures Wall ನಿರ್ಮಾಣ ಮಾಡುವಂತೆ ಶಿಫಾರಸ್ಸು ಮಾಡಿದ್ದು, ಅದರಂತೆ ರಸ್ತೆ ದುರಸ್ತಿಗೊಳಿಸಲು ರೂ.996.00 ಲಕ್ಷಗಳ ತಗಲಬಹುದೆಂದು ಅಂದಾಜಿಸಲಾಗಿದ್ದು, ಅದರನ್ವಯ ಪ್ರಸ್ತಾವನೆ ತಯಾರಿಸಿದ್ದು, ಪುನರ್ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು. |

ಲೋಇ 123 ಸಿಕ್ಯೂಎನ್ 2021(ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು